ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವುದು

3245 (3539); ಶ್ರೀ ಆನಂದಸಿಂಗ್ (ವಿಜಯನಗರ–ಬಳ್ಳಾರಿ)

ಅ) ಹೊಸಪೇಟೆ ತಾಲ್ಲೂಕಿನ ವಿಜಯನಗರ ಮತಕ್ಷೇತ್ರ ವ್ಯಾಪ್ತಿಯ 100 ಹಾಸಿಗೆಗಳ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಸದರಿ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಯಾವ ಮಾರ್ಗಸೂಚಿಯನ್ವಯ ಸರ್ಕಾರಿ ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸಲಾಗುವುದು (ಸಂಪೂರ್ಣ ಮಾಹಿತಿ ನೀಡುವುದು)?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) **ಮತ್ತು** ಆ) ಈಗಾಗಲೇ ಹೊಸಪೇಟೆ ತಾಲ್ಲೂಕಿನ ವಿಜಯನಗರದ ಆಸ್ಪತ್ರೆಯನ್ನು 100 ಹಾಸಿಗೆಗಳ ಸಾಮರ್ಥ್ಯಕ್ಕೆ ಮೇಲ್ದರ್ಜೆಗೇರಿಸಲಾಗಿದೆ.

ಇ) ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸಲು ಕಳೆದ ಮೂರು ವರ್ಷಗಳಲ್ಲಿ ಸದರಿ ಆಸ್ಪತ್ರೆಗಳ ಒಳ ಮತ್ತು ಹೊರ ರೋಗಿಗಳ ಸಂಖ್ಯೆ, ಬೆಡ್‌ಆಕ್ಯುಪೆನ್ಸಿರೇಟ್ ಹಾಗೂ ತಜ್ಞ ವೈದ್ಯರ ಲಭ್ಯತೆಯನ್ನಾಧರಿಸಿ ಮೇಲ್ದರ್ಜೆಗೇರಿಸಲಾಗುವುದು.